ಅ) ಅಕ್ರಮ ಗಣಿಗಾರಿಕೆ ನಡೆಸುತ್ತಿರುವವರು ಯಾರು ; ಅವರ ಮೇಲೆ ಸರ್ಕಾರ ಈ ವರೆಗೆ ಕೈಗೊಂಡಿರುವ ಕ್ರಮಗಳೇನು ?

ಇ) ಕಳೆದ ಹಲವಾರು ವರ್ಷಗಳಿಂದ ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದರೂ ಸಹ ಸರ್ಕಾರ ಕ್ರಮ ಕೈಗೊಳ್ಳದೇ ಇರಲು ಕಾರಣವೇನು ?

ಈ) ಅಕ್ರಮ ಗಣಿಗಾರಿಕೆಯಿಂದಾಗಿ ಗ್ರಾಮದಲ್ಲಿನ ಮನೆಗಳ ಗೋಡೆಗಳು ಬಿರುಕು ಬಿಟ್ಟಿದ್ದು, ಜಾನುವಾರುಗಳಿಗೆ ಹಾಗೂ ಜನರಿಗೆ ತೀವ್ರತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಉ) ಜನ ಹಾಗೂ ಜಾನುವಾರುಗಳಿಗೆ ಸಹಾಯಕವಾಗಲು ಸರ್ಕಾರ ಕೈಗೊಂಡಿರುವ ಕ್ರಮವೇನು ?

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು) :

ಅ) ಅಕ್ರಮ ಗಣಿಗಾರಿಕೆ ನಡೆಯುತ್ತಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಈ ಬಗ್ಗೆ ಯಾವುದೇ ಸಾರ್ವಜನಿಕ ದೂರು ಬಂದಿರುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಹೊರ ರಾಜ್ಯದ ಹಾಲಿನ ಮೇಲೆ ಸುಂಕ ಜಾರಿ

1167 (518) ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ) ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರತಿನಿತ್ಯ ಉತ್ಪಾದನೆಯಾಗುತ್ತಿರುವ ಹಾಲಿನ ಪ್ರಮಾಣ ಎಷ್ಟು ; ರಾಜ್ಯಕ್ಕೆ ಅಗತ್ಯವಿರುವ ಹಾಲಿನ ಪ್ರಮಾಣ ಎಷ್ಟು ?

ಆ) ಪ್ರತಿನಿತ್ಯ ರಾಜ್ಯಕ್ಕೆ ಯಾವ ಯಾವ ರಾಜ್ಯದಿಂದ ಹಾಲು ಸರಬರಾಜಾಗುತ್ತಿದೆ ?

ಇ) ಹೊರ ರಾಜ್ಯದ ಹಾಲಿನ ಮೇಲೆ ವಿಧಿಸಲಾಗುತ್ತಿರುವ ಸುಂಕ ಎಷ್ಟು ?

ಈ) ಹೊರ ರಾಜ್ಯದ ಹಾಲಿನಲ್ಲಿ ಆಗುವ ಕಲಬೆರೆಕೆಯನ್ನು ತಡೆಯಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) :

ಅ) ಭಾರತ ಸರ್ಕಾರದ 2001-02ನೇ ಸಾಲಿನ ಮಾದರಿ ಸಮೀಕ್ಷೆ ಯೋಜನೆಯ ಅಂದಾಜಿನ ಪ್ರಕಾರ ರಾಜ್ಯದಲ್ಲಿ ಪ್ರತಿನಿತ್ಯ 130 ಲಕ್ಷ ಲೀಟರ್‌ಗಳಷ್ಟು ಹಾಲು ಉತ್ಪಾದನೆಯಾಗುತ್ತಿದೆ. ನಗರ ಮತ್ತು ಪಟ್ಟಣಗಳಲ್ಲಿ ಪ್ರತಿನಿತ್ಯ 28.94 ಲಕ್ಷ ಕೆ.ಜಿ. ಹಾಲು ಅಗತ್ಯವಿರುತ್ತದೆ. (ಕೆ.ಎಂ.ಎಫ್. ಸಮೀಕ್ಷೆ ಪ್ರಕಾರ) ಗ್ರಾಮಾಂತರ ಪ್ರದೇಶಗಳಲ್ಲಿ ಪ್ರತಿನಿತ್ಯ ಅಗತ್ಯವಿರುವ ಹಾಲಿನ ಪ್ರಮಾಣದ ಬಗ್ಗೆ ನಿಖರವಾದ ಮಾಹಿತಿ ಲಭ್ಯವಿರುವುದಿಲ್ಲ.

ಆ) ತಮಿಳುನಾಡು, ಆಂಧ್ರಪ್ರದೇಶ ಮತ್ತು ಮಹಾರಾಷ್ಟ್ರ.

ಇ) ಇಲ್ಲ, ಇಂತಹ ತೆರಿಗೆಯನ್ನು ಅಂತರರಾಜ್ಯ ಹಾಲು ಸಾಗಾಣಿಕೆ ಮೇಲೆ ವಿಧಿಸಲು ಸಾಧ್ಯವಿಲ್ಲ.

ಈ) ನಗರಪಾಲಿಕೆ ಮತ್ತು ಪುರಸಭೆಗಳ ಪ್ರಾಧಿಕಾರ ಹಾಲಿನ ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೊಳಪಡಿಸಿ ಕಳಪೆ ದರ್ಜೆ ಹಾಲೆಂದು ಕಂಡುಬಂದಲ್ಲಿ ಕಳಪೆ ದರ್ಜೆ ಹಾಲಿನ ಮಾರಾಟಗಾರರ ವಿರುದ್ಧ ಕಾನುನು ಕ್ರಮ ಜರುಗಿಸಲಾಗುತ್ತಿದೆ.

ಚಿಕ್ಕನಾಯಕನಹಳ್ಳಿ ಪಶುವೈದ್ಯ ಆಸ್ಪತ್ರೆಗಳಲ್ಲಿ ಔಷಧಿ ಕೊರತೆ

1169 (1283) ಶ್ರೀ ಸುರೇಶ್‌ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಪಶುವೈದ್ಯ ಆಸ್ಪತ್ರೆಗಳಲ್ಲಿ ಔಷಧಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಬರಗಾಲದ ಈ ದಿನಗಳಲ್ಲಿ ರೈತರು ಸಂಕಷ್ಟದಲ್ಲಿರುವುದರಿಂದ ಅವರು ಸಾಕುಪ್ರಾಣಿಗಳ ರಕ್ಷಣೆಗೆ ಸರ್ಕಾರದಿಂದ ಯಾವ ಮುಂಜಾಗ್ರತೆ ಕ್ರಮ ಕೈಗೊಳ್ಳಲಾಗುತ್ತಿದೆ ?

ಇ) ಸಾಕಷ್ಟು ಔಷಧಿಗಳನ್ನು ಪಶುವೈದ್ಯ ಆಸ್ಪತ್ರೆಗಳಿಗೆ ಒದಗಿಸಲು ಕೈಗೊಳ್ಳಲಿರುವ ಕ್ರಮವೇನು ?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) :

ಅ) ಕೆಲವು ಔಷಧಿಗಳು ಕೊರತೆ ಇದೆ ಎಂದು ವರದಿಯಾಗಿದೆ.

ಆ) 1) ರೈತರಿಗೆ ಮೇವು ಸಾಗಿಸಲು ಸಾಗಾಣಿಕಾ ವೆಚ್ಚಕ್ಕಾಗಿ ಸಹಾಯಧನ ನೀಡಲಾಗುತ್ತದೆ.
2) ಮೇವು ಬೆಳೆಯಲು ಮೇವು ಬೀಜಗಳ ಕಿರುಪೊಟ್ಟಣಗಳನ್ನು ನೀರಾವರಿ ಸೌಲಭ್ಯ ಇರುವ ರೈತರಿಗೆ ಉಚಿತವಾಗಿ ಒದಗಿಸಲಾಗಿದೆ.
3) ಮೇವು ಅವಶ್ಯಕತೆ ಇರುವ ಸ್ಥಳಗಳಲ್ಲಿ ಗೋಶಾಲೆಗಳನ್ನು ಹಾಗೂ ಮೇವು ನಿಧಿಗಳನ್ನು ತೆರೆಯಲಾಗುತ್ತದೆ. ಔಷಧಿಗಳ ಖರೀದಿಗಾಗಿ ಜಿಲ್ಲಾಧಿಕಾರಿಗಳಿಗೆ ಹಣವನ್ನು ನಿಗದಿ ಮಾಡಲಾಗಿದೆ.

ಇ) ಪ್ರಸಕ್ತ ಸಾಲಿನಲ್ಲಿ ರೂ. 4.79 ಕೋಟಿಗಳ ಮೊತ್ತದ ಔಷಧಿಗಳನ್ನು ಸರಬರಾಜು ಮಾಡಲಾಗಿದೆ. ಮುಂದುವರಿದು ರೂ. 1.11 ಕೋಟಿ ರೂ.ಗಳ ಔಷಧಿಗಳ ಖರೀದಿಯನ್ನು ಸರ್ಕಾರ ಅನುಮೋದಿಸಿದೆ. ವಿಶೇಷವಾಗಿ ಬರಪೀಡಿತ ಪ್ರದೇಶಗಳಿಗೆ 3.00 ಕೋಟಿ ಮೊತ್ತದ ಔಷಧಿಗಳನ್ನು ಖರೀದಿಸಲು ಜಿಲ್ಲಾಧಿಕಾರಿಗಳಿಗೆ ವಂಟನ ಬಿಡುಗಡೆ ಮಾಡಲಾಗಿದೆ.

ಚಿಕ್ಕನಾಯಕನಹಳ್ಳಿ ಕ್ಷೇತ್ರದ ಪಶುಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವುದು

1171 (1285) ಶ್ರೀ ಸುರೇಶ್‌ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

ಆ) ಹಾಗಿದ್ದಲ್ಲಿ, ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ ಯಾವ ಯಾವ ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸಲಾಗುವುದು ?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.